# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1256 |
| ವಿಧಾನ ಪರಿಷತ್ತ್ ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19-12-2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆ, ಲಿಂಗಸೂರು ತಾಲ್ಲೂಕಿನ ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ಮಂಜೂರು ಮಾಡಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br><br>Standing Fire Advisory Council(SFAC) ರನ್ವಯ ಅಗ್ನಿಶಾಮಕ ಠಾಣೆಯ ಸ್ಥಾಪನೆಗೆ ಮುಖ್ಯವಾಗಿ ಜನಸಂಖ್ಯೆ, ಪ್ರತಿಕ್ರಿಯೆ ಸಮಯ ಮತ್ತು ಟ್ರಾಫಿಕ್ ದಟ್ಟಣೆಯ ಜೊತೆಗೆ ಜನಸಂಖ್ಯೆಯನ್ನಾಧರಿಸಿ ಅಗ್ನಿಶಾಮಕ ಠಾಣೆ ಮತ್ತು ಅಗ್ನಿಶಾಮಕ ಉಪಕರಣಗಳ ಅಗತ್ಯತೆಯನ್ನು ನಿರ್ದಿಷ್ಟಪಡಿಸಲಾಗಿದೆ. ಹೊಸದಾಗಿ ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸಲು ಈ ಕೆಳಕಂಡ ಮಾನದಂಡಗಳನ್ನು ನಿಗಧಿಪಡಿಸಲಾಗಿರುತ್ತದೆ:<br><br>1. ನಗರ ವ್ಯಾಪ್ತಿಯ ಪ್ರತಿ 10 ಚ.ಕಿ.ಮೀಗೆ 01 ಅಗ್ನಿಶಾಮಕ ಠಾಣೆ ಇರಬೇಕಾಗುತ್ತದೆ.<br>2. ಗ್ರಾಮೀಣ ಪ್ರದೇಶದ ವ್ಯಾಪ್ತಿಯ ಪ್ರತಿ 50 ಚ.ಕಿ.ಮೀಗೆ 01 ಅಗ್ನಿಶಾಮಕ ಠಾಣೆ ಇರಬೇಕಾಗುತ್ತದೆ.<br><br>ಜನ ಸಂಖ್ಯೆ: 50000 ರಿಂದ 300000 ಇರಬೇಕಾಗಿದ್ದು, ಸ್ಪಂದನಾ ಸಮಯವು ನಗರ ಪ್ರದೇಶದಲ್ಲಿ 5 ನಿಮಿಷ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ 20 ನಿಮಿಷದಲ್ಲಿ ತಲುಪಬೇಕಾಗಿರುತ್ತದೆ.<br><br>ಮೇಲಿನ ಮಾನದಂಡಗಳನ್ವಯ ರಾಯಚೂರು ಜಿಲ್ಲೆಯ ಲಿಂಗಸೂಗುರು ತಾಲ್ಲೂಕಿನ ಹಟ್ಟಿ ಪಟ್ಟಣದಲ್ಲಿ ಹೊಸ ಅಗ್ನಿಶಾಮಕ ಠಾಣೆಯನ್ನು ತೆರೆಯುವ ಪ್ರಸ್ತಾವನೆಯನ್ನು ಪರಿಗಣಿಸಲು ಅವಕಾಶವಿರುವುದಿಲ್ಲ.<br><br>ಹಟ್ಟಿ ಪಟ್ಟಣವು ಲಿಂಗಸೂಗೂರು ಅಗ್ನಿಶಾಮಕ ಠಾಣೆಯಿಂದ 22 ಕಿ.ಮೀ, ದೇವದುರ್ಗ 35 ಕಿ.ಮೀ. ಅಂತರದಲ್ಲಿದ್ದು, ಅಗ್ನಿ ಅವಘಡಗಳು ಸಂಭವಿಸಿದ್ದಲ್ಲಿ ಲಿಂಗಸೂಗೂರು ಹಾಗೂ ದೇವದುರ್ಗ ಅಗ್ನಿಶಾಮಕ ಠಾಣೆಯಿಂದ ತೆರಳಿ ಬೆಂಕಿಯನ್ನು ನಂದಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ಕಟ್ಟಡ ಮಂಜೂರು ಮಾಡಿ ಅಗತ್ಯ ಸಿಬ್ಬಂದಿಗಳನ್ನು ಒದಗಿಸಿ ಆ ಮೂಲಕ ಅಗ್ನಿಶಾಮಕ ಠಾಣೆ ಕಾರ್ಯಾರಂಭ ಮಾಡಲು ಇದುವರೆವಿಗೂ ಸರ್ಕಾರ ಅಗತ್ಯ ಕ್ರಮ ವಹಿಸದಿರಲು ಕಾರಣಗಳೇನು; | |
| ಇ) | ಯಾವ ಕಾಲಮಿತಿಯೊಳಗೆ ಅಗ್ನಿಶಾಮಕ ಠಾಣೆ ಕಟ್ಟಡ ಮಂಜೂರು ಮಾಡಿ ಅದು ಕಾರ್ಯಾರಂಭ ಮಾಡಲು ಸರ್ಕಾರ ಅಗತ್ಯ ಕ್ರಮ ವಹಿಸುವುದು? | |

**ಸಂಖ್ಯೆ: ಹೆಚ್‌ಡಿ 244 ಎಸ್‌ಎಫ್‌ಬಿ 2024**

**(ಡಾ. ಜಿ. ಪರಮೇಶ್ವರ)**
**ಗೃಹ ಸಚಿವರು**